ಹುಕ್ಕೇರಿ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಯೋಜನೆ

955 - ಶ್ರೀ ಉಮೇಶ್ ವಿ. ಕತ್ತಿ (ಹುಕ್ಕೇರಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಪಾಶ್ಚಾಪೂರ ಹಾಗೂ ಸುತ್ತಲಿನ ಹನ್ನೊಂದು ಗ್ರಾಮಗಳಿಗೆ ಕುಡಿಯುವ ನೀರಿನ ಯೋಜನೆ ಪ್ರಾರಂಭಿಸಲಾಗಿದ್ದು ಅದು ಪೂರ್ತಿ ಹಾಳಾಗಿರುವ ವಿಷಯವು ಸರ್ಕಾರದವರ ಗಮನಕ್ಕೆ ಬಂದಿದೆಯೆ?

ಆ) ಬಂದಿದ್ದಲ್ಲಿ, ಅದನ್ನು ಸುಸಜ್ಜಿತಗೊಳಿಸಲು ಕೈಕೊಂಡ ಕ್ರಮಗಳೇನು?

ಇ) ಯಾವಾಗ ಪೂರ್ತಿಯಾಗಿ ಸುಸಜ್ಜಿತಗೊಳಿಸಲಾಗುವುದು?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆ ಸಚಿವರು) :

ಅ) ಈಗ ಯಾವ ತೊಂದರೆಯೂ ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಹುಕ್ಕೇರಿ ತಾಲ್ಲೂಕಿನ ಎನ್.ಆರ್. ಡಬ್ಲ್ಯೂ. ಎಸ್. ಸ್ಕೀಮ್‌ಗಳಿಗೆ ಮಂಜೂರಾದ ಹಣ

956 - ಶ್ರೀ ಉಮೇಶ್ ವಿ.ಕತ್ತಿ (ಹುಕ್ಕೇರಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಕ್ಷೇತ್ರದಲ್ಲಿ ಈ ವರ್ಷ ಮಂಜೂರಾದ ಎನ್.ಆರ್.ಡಬ್ಲ್ಯೂ.ಎಸ್. ಸ್ಕೀಮ್‌ಗಳೆಷ್ಟು?

ಆ) ಸದರಿ ಸ್ಕೀಮ್‌ಗಳ ಬಗ್ಗೆ ಈ ವರ್ಷ ಖರ್ಚು ಮಾಡಿದ ಹಣವೆಷ್ಟು?

ಇ) ಯಾವ ಯಾವ ಸ್ಕೀಮ್‌ಗಳು ಯಾವ ಯಾವ ಹಂತದಲ್ಲಿದೆ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಸಚಿವರು) :

ಅ) 23.

ಆ) ರೂ. 2.94 ಲಕ್ಷಗಳು.

ಇ) ಯೋಜನೆಗಳ ಹಂತವನ್ನು ತಿಳಿಸುವ ಪಟ್ಟಿಯನ್ನು ಲಗತ್ತಿಸಲಾಗಿದೆ.